# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಮುನಿರಾಜುಗೌಡ ಪಿ.ಎಂ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1303

ಉತ್ತರಿಸಬೇಕಾದ ದಿನಾಂಕ : 08-03-2022

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ಸ್ವ-ಸಹಾಯ ಗುಂಪುಗಳ ಸಾಲದ ಮೇಲೆ ತಪ್ಪಾಗಿ ಬಡ್ಡಿವಸೂಲಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು, ಬಂದಿದೆ. |
| ಆ) | ತಪ್ಪಿತಸ್ಥರ ವಿರುದ್ಧ ಕ್ರಮವೇನು ಕೈಗೊಳ್ಳಲಾಗಿದೆ; | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಕೆ.ಜಿ.ಎಫ್ ಶಾಖೆಯಲ್ಲಿ ನಿಯಮಗಳನ್ನು ಉಲ್ಲಂಘಿಸಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ನಿಗಧಿಪಡಿಸಿರುವ ಬಡ್ಡಿದರಕ್ಕಿಂತ ಬ್ಯಾಂಕಿನವರು ಹೆಚ್ಚು ಬಡ್ಡಿ ಕ್ಲೈಂ ಮಾಡಿರುತ್ತಾರೆಂದು ಆರೋಪಿಸಿ ಮಾಜಿ ಶಾಸಕರಾದ ಶ್ರೀ ವೈ. ಸಂಪಂಗಿ ಇವರು ನಿಬಂಧಕರಿಗೆ ದೂರನ್ನು ನೀಡಿರುತ್ತಾರೆ. ಈ ದೂರನ್ನು ಆಧರಿಸಿ ದಿನಾಂಕ:18.11.2021 ರಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಕಲಂ 65 ರ ಪರಿವೀಕ್ಷಣಾಧಿಕಾರಿಯಾಗಿ ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ ಇವರು ನೇಮಿಸಿದ್ದು, ಪರಿವೀಕ್ಷಣೆಯು ಪ್ರಗತಿಯಲ್ಲಿರುತ್ತದೆ.<br><br>ಸದರಿ ಪರಿವೀಕ್ಷಣೆ ಪೂರ್ಣಗೊಂಡು ವರದಿ ಸ್ವೀಕೃತವಾದ ನಂತರ ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. |
| ಇ) | ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು? | ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ ಇವರು ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ, ಬೆಂಗಳೂರು ಇವರನ್ನು ಕಲಂ 65 ರ ಪರಿವೀಕ್ಷಣಾಧಿಕಾರಿಯಾಗಿ ದಿ:21.10.2021 ರಂದು ನೇಮಿಸಿ ಆದೇಶ ಹೊರಡಿಸಿದ್ದರು.<br><br>ಆದರೆ, ಸದರಿ ಅಧಿಕಾರಿಯು ದಿನಾಂಕ:09.11.2021 ರಂದು ಜಂಟಿ ನಿಬಂಧಕರಿಗೆ ಮನವಿ ಸಲ್ಲಿಸುತ್ತಾ, ಎರವಲು ಸೇವೆಯ |

| | | |
|---|---|---|
| | | ಮೇಲೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಪರಿವೀಕ್ಷಣೆ ಕಾರ್ಯ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿದ್ದರಿಂದ ಸದರಿ ಪರಿವೀಕ್ಷಣಾಧಿಕಾರಿಯನ್ನು ಬದಲಾಯಿಸಿ ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ ಇವರು ದಿನಾಂಕ:18-11-2021 ರಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಕಲಂ 65 ರ ಪರಿವೀಕ್ಷಣಾಧಿಕಾರಿಯಾಗಿ ನೇಮಿಸಿದ್ದು, ಪ್ರಸ್ತುತ ಪರಿವೀಕ್ಷಣೆಯು ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ : ಸಿಒ 86 ಸಿಎಲ್‌ಎಸ್ 2022**

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು